# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:–** ಶ್ರೀ ಸಿದ್ದನಗೌಡ ಕಾರ್ಯದರ್ಶಿ, ಗೊರೆಬಾಳ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಮಾನ್ಯ ಉಪಲೋಕಾಯುಕ್ತರ ಅಂತಿಮ ವರದಿಯ ಹಿನ್ನೆಲೆಯಲ್ಲಿ ಅಂತಿಮ ದಂಡನಾ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:–**
1) ಅಪರ ನಿಬಂಧಕರು (ವಿಚಾರಣೆಗಳು–4), ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ. ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ–238/2009/ಎಆರ್‌ಇ–4 ದಿನಾಂಕ:16.06.2016
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 361 ಗ್ರಾಪಂಕಾ 2016, ದಿ:14.09.2016
3) ಅಪರ ನಿಬಂಧಕರು (ವಿಚಾರಣೆಗಳು–10), ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ವಿಚಾರಣಾ ವರದಿ ಸಂಖ್ಯೆ: ಉಪಲೋಕ್–1/ಡಿಇ/445/2016/ಎಆರ್‌ಇ–10, ದಿನಾಂಕ:17.12.2018
4) ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸು ಸಂಖ್ಯೆ: ಉಪಲೋಕ್–1/ಡಿಇ/445/2016/ಎಆರ್‌ಇ–10, ದಿನಾಂಕ:19.12.2018.
5) ಆಪಾದಿತ ನೌಕರರಿಗೆ ಜಾರಿಗೊಳಿಸಲಾದ ಸರ್ಕಾರದ 2ನೇ ಕಾರಣ ಕೇಳುವ ನೋಟೀಸು ದಿನಾಂಕ:07.03.2019.

******

**ಪ್ರಸ್ತಾವನೆ:–**

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಅಪರ ನಿಬಂಧಕರು ವಿಚಾರಣೆಗಳು–4, ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರು ದಿನಾಂಕ 16.06.2016ರ ಪ್ರಸ್ತಾವನೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಸಿದ್ದನಗೌಡ ಕಾರ್ಯದರ್ಶಿ, ಗೊರೆಬಾಳ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಗ್ರಾಮ ಪಂಚಾಯಿತಿಯಲ್ಲಿ 2005 ರಿಂದ 2009ರ ವರೆಗೆ ಆಶ್ರಯ ವಸತಿ ಯೋಜನೆ, ಇಂದಿರಾ ಆವಾಸ್ ವಸತಿ ಯೋಜನೆ, ಡಾ॥ ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ, ವೈಯಕ್ತಿಕ ಶೌಚಾಲಯ ಮತ್ತು ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಸಾಮಾಜಿಕ ಅರಣ್ಯೀಕರಣ ಕಾರ್ಯದಲ್ಲಿ ಅಕ್ರಮ ಅವ್ಯವಹಾರಗಳನ್ನು ನಡೆಸಿರುತ್ತಾರೆಂದು ದೂರುದಾರರಾದ ಶ್ರೀ ವೆಂಕನಗೌಡ ತಂದೆ ಬಾಲಣ್ಣಗೌಡ ಪಾಟೀಲ್, ಹಳಬಾವಿ ಗ್ರಾಮ, ಲಿಂಗಸುಗೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರು ಸಲ್ಲಿಸಿದ ದೂರಿನ ಅನ್ವಯ ತನಿಖೆ ನಡೆಸಿ ತನಿಖಾ ವರದಿಯೊಂದಿಗೆ ಆಪಾಧಿತ ನೌಕರರ ಮೇಲಿನ ಆರೋಪಗಳು ಮೇಲ್ನೋಟಕ್ಕೆ ರುಜುವಾತಾಗಿದ್ದು, ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ಇಲಾಖಾ ವಿಚಾರಣೆಗೆ ವಹಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(2)ರ ಆದೇಶದಲ್ಲಿ ಸರ್ಕಾರವು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರ ವರದಿ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಆಪಾಧಿತ ನೌಕರರ ಮೇಲಿನ ಆರೋಪಗಳ ಕುರಿತು ಪ್ರಕರಣಗಳ ಸತ್ಯಾಸತ್ಯತೆಯನ್ನು ತಿಳಿಯಲು ಪ್ರಕರಣವನ್ನು ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರಡಿ ಪ್ರಕರಣದ ವಿಚಾರಣೆಗೆ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ(3)ರಲ್ಲಿ ವಿಚಾರಣಾಧಿಕಾರಿಗಳು ಪ್ರಕರಣದ ಪೂರ್ಣ ಪ್ರಮಾಣದ ವಿಚಾರಣೆಯನ್ನು ನಡೆಸಿ ದಿನಾಂಕ 17.12.2018 ರಂದು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆಪಾಧಿತ ನೌಕರರ ಸನ್ 2005 ರಿಂದ 2009ರ ವರೆಗಿನ ವರದಿಯಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಾಣ ಕಾರ್ಯದಲ್ಲಿ ಕಡತವನ್ನು ನಿಯಮ ಪ್ರಕಾರ ನಿರ್ವಹಿಸದೆ 60 ಫಲಾನುಭವಿಗಳು ಯಾವ ಶೌಚಾಲಯ ನಿರ್ಮಾಣವನ್ನು ಮಾಡದೇ ಇದ್ದರೂ ಸಹ ಅವರಿಗೆ ತಲಾ ರೂ. 1200/– ರಂತೆ ಒಟ್ಟು ರೂ. 72000/– ಗಳ ಹಣವನ್ನು ಬಿಡುಗಡೆ ಮಾಡಿದೆ ಎಂದು ಕ್ಯಾಶ್‌ಬುಕ್‌ನಲ್ಲಿ ನಮೂದಿಸಿ ಹಣ ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪವೆಸಗಿರುವ ಆರೋಪವು ರುಜುವಾತಾಗಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(4)ರಲ್ಲಿ ಸದರಿ ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರು ದಿನಾಂಕ 19.12.2018ರ ಶಿಫಾರಸ್ಸಿನಲ್ಲಿ ಆಪಾದಿತ ಸರ್ಕಾರಿ ನೌಕರರಿಂದ ಉಂಟಾಗಿರುವ ಆರ್ಥಿಕ ನಷ್ಟ ರೂ. 72000/– ಗಳನ್ನು ಅವರು ಪಡೆಯುತ್ತಿರುವ ಪಿಂಚಣಿ ಸೌಲಭ್ಯಗಳಿಂದ ವಸೂಲಿ ಮಾಡುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(5)ರಲ್ಲಿ ಆಪಾದಿತ ಸರ್ಕಾರಿ ನೌಕರ ಶ್ರೀ ಸಿದ್ದನಗೌಡ, ಕಾರ್ಯದರ್ಶಿ (ಹಾಲಿ ನಿವೃತ್ತ, ಸಾ. ಚಿತ್ತಾಪುರ, ಲಿಂಗಸಗೂರು ತಾಲ್ಲೂಕು) ಗೊರೆಬಾಳ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು ಇವರಿಗೆ ಅಪರ ನಿಬಂಧಕರು, ವಿಚಾರಣೆಗಳು–10 ರವರು ದಿನಾಂಕ 17.12.2018 ರಂದು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರು ದಿನಾಂಕ 19.12.2018 ರಂದು ಮಾಡಿರುವ ಶಿಫಾರಸ್ಸಿನ ಪ್ರತಿಗಳೊಂದಿಗೆ 2ನೇ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿದೆ.

ಆಪಾಧಿತ ನೌಕರರು ದಿನಾಂಕ 07.03.2019 ರಂದು ಜಾರಿಗೊಳಿಸಲಾದ 2ನೇ ಕಾರಣ ಕೇಳುವ ನೋಟೀಸನ್ನು ದಿನಾಂಕ 03.05.2019ರಂದು ಸ್ವೀಕರಿಸಿರುತ್ತಾರೆ. ಸದರಿ ನೋಟೀಸಿಗೆ ಯಾವುದೇ ಲಿಖಿತ ಸಮಜಾಯಿಷಿ/ ಉತ್ತರ ಸಲ್ಲಿಸಿರುವುದಿಲ್ಲ.

ಹಾಗಾಗಿ ಆಪಾಧಿತ ನೌಕರರು ಯಾವುದೇ ಲಿಖಿತ ಸಮಜಾಯಿಷಿಯನ್ನು ಸಲ್ಲಿಸದೇ ಇರುವುದರಿಂದ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಆಪಾಧಿತ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಬಿ)ರನ್ವಯ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟ ರೂ. 72000/– ಗಳನ್ನು ಅವರ ಪಿಂಚಣಿ ಉಪದಾನಗಳಿಂದ ತಡೆಹಿಡಿಯುವ ದಂಡನೆ ವಿಧಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/49/ಗ್ರಾಪಂಕಾ/2019, ಬೆಂಗಳೂರು, ದಿನಾಂಕ: 16ನೇ ಆಗಸ್ಟ್ 2022.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಸಿದ್ದನಗೌಡ, ಕಾರ್ಯದರ್ಶಿ (ಹಾಲಿ ನಿವೃತ್ತ, ಸಾ. ಚಿತ್ತಾಪುರ, ಲಿಂಗಸಗೂರು ತಾಲ್ಲೂಕು) ಗೊರೆಬಾಳ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರ ವಿರುದ್ದದ ಆರೋಪಗಳು ರುಜುವಾತಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಗಳು 214(1)(ಬಿ) ರನ್ವಯ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟ ರೂ. 72000/– ಗಳನ್ನು ಅವರ ಪಿಂಚಣಿ ಉಪದಾನಗಳಿಂದ ತಡೆಹಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 16/8/22.
(ನವೀನ್ ಕುಮಾರ್ ಬಿ.)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

16/8/22

ಇವರಿಗೆ:–

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು–1, ಕರ್ನಾಟಕ, ಬಹುಮಹಡಿ ಕಟ್ಟಡ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು
4) ಅಪರ ನಿಬಂಧಕರು(ವಿಚಾರಣೆಗಳು–10), ಕರ್ನಾಟಕ ಲೋಕಾಯುಕ್ತ, ಬೆಂಗಳೂರು
5) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ರಾಯಚೂರು ಜಿಲ್ಲೆ.
6) ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ.
7) ಶ್ರೀ ಸಿದ್ದನಗೌಡ, ಕಾರ್ಯದರ್ಶಿ (ಹಾಲಿ ನಿವೃತ್ತ, ಸಾ. ಚಿತ್ತಾಪುರ, ಲಿಂಗಸಗೂರು ತಾಲ್ಲೂಕು) ಗೊರೆಬಾಳ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ.
8) ನಿರ್ದೇಶಕರು (ಇ–ಆಡಳಿತ), ಇಲಾಖಾ ವೆಬ್–ಸೈಟಿನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.